# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 22 ಎಂಪಿಎಸ್ 2005

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 12-12-2006

## ತಿದ್ದೋಲೆ

ದಿನಾಂಕ 20-07-2004ರ ಸುತ್ತೋಲೆ ಸಂಖ್ಯೆ: ಇಡಿ 5 ಎಸ್‌ಎಂಸಿ 2002ರ ಪುಟ 2 ರಲ್ಲಿನ ಕ್ರಮ ಸಂಖ್ಯೆ: 4ರ ನಮೂದು ಈ ಕೆಳಕಂಡಂತೆ ಇದೆ:-

*" ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಶೇಕಡ 50 ರಷ್ಟು ಭಾಷಾ / ಮತೀಯ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ದಾಖಲ್ (admissions) ಮಾಡಿಕೊಳ್ಳತಕ್ಕದ್ದು"*

ಸದರಿ ನಮೂದನ್ನು ಕೆಳಕಂಡಂತೆ ಬದಲಾಯಿಸಿ ಓದಿಕೊಳ್ಳತಕ್ಕದ್ದು;

*"ರಾಜ್ಯದಲ್ಲಿ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳನ್ನು ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಸಂಬಂಧ ಆಯಾಯಾ ಭಾಷಾ /ಮತೀಯ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಪ್ರದೇಶದಲ್ಲಿ ವಾಸಿಸುತ್ತಿರುವ ಆಯಾಯಾ ಅಲ್ಪಸಂಖ್ಯಾತ ಸಮುದಾಯದ ಜನಗಣತಿಗೆ ತಕ್ಕಂತೆ, ಆಯಾಯಾ ಅಲ್ಪಸಂಖ್ಯಾತ ವರ್ಗದ ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಕಾಪಾಡಿಕೊಳ್ಳಲು, ಆಯಾಯ ವರ್ಗದ ಅಲ್ಪಸಂಖ್ಯಾತ ವಿದ್ಯಾರ್ಥಿಗಳನ್ನು ಕನಿಷ್ಠ ಅದೇ ಪ್ರಮಾಣದಲ್ಲಿ ದಾಖಲು ಮಾಡಿಕೊಳ್ಳತಕ್ಕದ್ದು"*

(ಎಂ.ಎನ್. ಸೋಮಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ

ಗೆ:-

1) ಸರ್ಕಾರದ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬೆಂಗಳೂರು
3) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ನಿರ್ದೇಶಕರು, ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತ ಶಾಲೆಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು